# ಕರ್ನಾಟಕ ಸರ್ಕಾರ

ಕಡತ ಸಂಖ್ಯೆ : ಗ್ರಾಅಪ 19 ಜೈಅಯೋ 2008

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ 01.07.2010

## ಅಧಿಸೂಚನೆ

ವಿಷಯ : ಪರಿಷ್ಕೃತ ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯ ರಚನೆ ಕುರಿತು

ಉಲ್ಲೇಖ ಸರ್ಕಾರದ ಅಧಿಸೂಚನೆ ಸಂಖ್ಯೆ : ಗ್ರಾಅಪ 19 ಜೈಅಯೋ 2008 ದಿನಾಂಕ 09.03.2009

ಉಲ್ಲೇಖಿತ ಅಧಿಸೂಚನೆಯಲ್ಲಿ ಕರ್ನಾಟಕ ರಾಜ್ಯ ಜೈವಿಕ ಇಂಧನ ನೀತಿ-2009 ರಲ್ಲಿ ಅನುಮೋದಿತಗೊಂಡ ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯ ರಚನೆಯನ್ನು ಈ ಕೆಳಗಿನ ಮಾರ್ಪಾಡುಗಳೊಂದಿಗೆ ಪರಿಷ್ಕರಿಸಿ ಪುನರ್ ರಚಿಸಲಾಗಿದೆ.

1. ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯು ರಚನೆಯಾಗುವುದರಿಂದ, ಜೈವಿಕ ಇಂಧನ ಕಾರ್ಯಪಡೆಯ ಪ್ರತ್ಯೇಕ ಅಸ್ತಿತ್ವದ ಅಗತ್ಯವಿರುವುದಿಲ್ಲ. ಸದರಿ ಕಾರ್ಯಪಡೆಯನ್ನು ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯಲ್ಲಿ ವಿಲೀನಗೊಳಿಸಿದೆ.
2. 9ನೇ ಮಾರ್ಚ್ 2009 ರಂದು ಹೊರಡಿಸಲಾದ ಅಧಿಸೂಚನೆಯನ್ವಯ ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯಲ್ಲಿನ ಆಡಳಿತ ಸಮಿತಿಯು ಯಾವುದೇ ಮಾರ್ಪಾಡುಗಳಿಲ್ಲದೇ ಯಥಾಸ್ಥಿತಿಯಲ್ಲಿ ಮುಂದುವರಿಯುವುದು
3. ಅಧ್ಯಕ್ಷರು, ಜೈವಿಕ ಇಂಧನ ಕಾರ್ಯಪಡೆ, ರವರನ್ನು ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯಲ್ಲಿನ ಕಾರ್ಯಕಾರಿ ಸಮಿತಿಯ ಅಧ್ಯಕ್ಷರನ್ನಾಗಿ ನೇಮಿಸಿದೆ.
4. ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯ ಕಾರ್ಯಕಾರಿ ಸಮಿತಿಯ ಉಪಾಧ್ಯಕ್ಷರಾಗಿ ಸರ್ಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು ಕಾರ್ಯನಿರ್ವಹಿಸುವುದು.
5. ಜೈವಿಕ ಇಂಧನ ಕಾರ್ಯಪಡೆಯ ಎಲ್ಲಾ ಅಧಿಕಾರೇತರ ಸದಸ್ಯರುಗಳು ಮಂಡಳಿಯ ಕಾರ್ಯಕಾರಿ ಸಮಿತಿಯಲ್ಲಿ ಅಧಿಕಾರೇತರ ಸದಸ್ಯರಾಗಿ ಮುಂದುವರಿಯುವರು.
6. ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯ ಕಾರ್ಯಕಾರಿ ಸಮಿತಿಯ ಅಧಿಕಾರಿಯುತ್ತ ಸದಸ್ಯರುಗಳು ಹಾಲಿ ಇದ್ದಂತೆಯೇ ಮುಂದುವರಿಯುವರು.
7. ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯ ಪರಿಷ್ಕೃತ ಕಾರ್ಯಕಾರಿ ಸಮಿತಿ ರಚನೆ ಕುರಿತು ಅನುಬಂಧವನ್ನು ಅನುಮೋದಿಸಿ ಇದರೊಂದಿಗೆ ಲಗತ್ತಿಸಿದೆ.
8. ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ ಹಾಗೂ ಕಾರ್ಯಕಾರಿ ಸಮಿತಿಯ ಅಧಿಕಾರೇತರ ಸದಸ್ಯರುಗಳ ಅವಧಿ ಸರ್ಕಾರದ ವಿವೇಚನೆಗೊಳಪಟ್ಟಿರುತ್ತದೆ.

(ಜಿ.ಎಸ್.ನಾರಾಯಣಸ್ವಾಮಿ)
ಸರ್ಕಾರದ ಕಾರ್ಯದರ್ಶಿ(ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ:
ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ರವರಿಗೆ ವಿಶೇಷ ಗೆಜೆಟ್‌ನಲ್ಲಿ ಪ್ರಕಟಿಸುವಂತೆ ಕೋರಿದೆ.

ಪ್ರತಿ:

1. ಮಹಾಲೇಖಪಾಲರು, ಕರ್ನಾಟಕ , ಬೆಂಗಳೂರು
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ , ಬೆಂಗಳೂರು
3. ಸರ್ಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು
4. ಮಾನ್ಯ ಉಪಾಧ್ಯಕ್ಷರು, ರಾಜ್ಯ ಯೋಜನಾ ಮಂಡಳಿ, ಬೆಂಗಳೂರು.
5. ಮಾನ್ಯ ಮುಖ್ಯ ಮಂತ್ರಿಗಳ ಪ್ರಧಾನ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
6. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
7. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
8. ಮಾನ್ಯ ತೋಟಗಾರಿಕಾ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
9. ಮಾನ್ಯ ವಾಣಿಜ್ಯ ಮತ್ತು ಕೈಗಾರಿಕಾ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
10. ಮಾನ್ಯ ಅರಣ್ಯ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
11. ಮಾನ್ಯ ಕಂದಾಯ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
12. ಮಾನ್ಯ ಜೀವಿಶಾಸ್ತ್ರ, ಪರಿಸರ ಮತ್ತು ಒಲನಾಡು ಜಳಸಾರಿಗೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
13. ಮಾನ್ಯ ಸಾರಿಗೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
14. ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧಬೆಂಗಳೂರು
15. ಬಯೋ ಇಂಧನ ಟಾಸ್ಕಫೋರ್ಸ್ ಸಮಿತಿಯ ಮಾನ್ಯ ಅಧ್ಯಕ್ಷರ ಆಪ್ತ ಕಾರ್ಯದರ್ಶಿ, 5ನೇ ಹಂತ, ಬಹುಮಹಡಿ ಕಟ್ಟಡ , ಬೆಂಗಳೂರು
16. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು,
17. ಮಂಡಳಿಯ ಅಧಿಕಾರೇತರ ಸದಸ್ಯರುಗಳು
18. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು
19. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
20. ಆಯುಕ್ತರು , ಜಲಾನಯನ ಇಲಾಖೆ /ಅಬಕಾರಿ ಇಲಾಖೆ ಅಯುಕ್ತರು ಮತ್ತು ಸಕ್ಕರೆ ಅಭಿವೃದ್ಧಿ ಆಯುಕ್ತರು
21. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಪಾನೀಯ ನಿಗಮ, ಬೆಂಗಳೂರು
22. ಉಪಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು/ಧಾರವಾಡ/ರಾಯಚೂರು
23. ಉಪಕುಲಪತಿಗಳು, ತೋಟಗಾರಿಕೆ ವಿಶ್ವವಿದ್ಯಾಲಯ, ಬಾಗಲಕೋಟೆ
24. ರಕ್ಷಾಕಡತಕ್ಕೆ/ಹೆಚ್ಚುವರಿ ಪ್ರತಿ.